ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಮಣ್ಣಿನ ಫಲವತ್ತತೆ ಮತ್ತು ಪರೀಕ್ಷಾ ಪ್ರಯೋಗಾಲಯಗಳ ಸ್ಥಾಪನೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) -

49 (306) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಮಣ್ಣಿನ ಫಲವತ್ತತೆಗೆ ಸಂಬಂಧಿಸಿದಂತೆ ಕೃಷಿ ಭೂಮಿ ಗರಿಷ್ಠ ಸವಾಲುಗಳನ್ನು ಎದುರಿಸುತ್ತಿರುವ ರಾಜ್ಯದ ಜಿಲ್ಲೆಗಳು ಯಾವುವು ;

(ಆ) ಈ ಜಿಲ್ಲೆಗಳಲ್ಲಿನ ಮಣ್ಣಿನ ಫಲವತ್ತತೆ ಕಾರ್ಡ್/ಮಣ್ಣಿನ ಆರೋಗ್ಯ ಕಾರ್ಡ್‌ಗಳನ್ನು ಎಷ್ಟು ಮಂದಿ ರೈತರಿಗೆ ವಿತರಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಸ್ಥಾಪಿಸಲಾಗಿರುವ ಮಣ್ಣಿನ ಪರೀಕ್ಷಾ ಪ್ರಯೋಗಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ರಾಜ್ಯದ ಪ್ರತಿ ಜಿಲ್ಲೆಯಲ್ಲೂ ಕನಿಷ್ಠ ಒಂದು ಮಣ್ಣಿನ ಪರೀಕ್ಷಾ ಪ್ರಯೋಗಾಲಯವನ್ನು ಮತ್ತು ಸಂಚಾರಿ ಮಣ್ಣಿನ ಪರೀಕ್ಷಾ ಪ್ರಯೋಗಾಲಯವನ್ನು ಸ್ಥಾಪಿಸಲು ಸರ್ಕಾರ ಯೋಜಿಸಿದೆಯೇ ;

(ಉ) ಮಣ್ಣಿನ ಆರೋಗ್ಯ ಕಾರ್ಡ್‌ಯೋಜನೆಯ ವಿತರಣೆಯಲ್ಲಿ ಖಾಸಗಿ ಸಂಸ್ಥೆಗಳು ಮತ್ತು ನಿರುದ್ಯೋಗಿ ಕೃಷಿ ಪದವೀಧರರು ಮತ್ತು ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಳ್ಳುವಿಕೆಯನ್ನು ಸರ್ಕಾರ ಪರಿಗಣಿಸಿ, ಕ್ರಮ ತೆಗೆದುಕೊಳ್ಳುವುದೇ ?